ಪಬ್ ಮತ್ತು ಲೈವ್ ಬ್ಯಾಂಡ್‌ಗಳ ವಿವರ

429 (958) ಶ್ರೀ ಖಾದರ್ ಯು.ಟಿ. (ಮಂಗಳೂರು):–ಅಬಕಾರಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಕಳೆದ 2 ವರ್ಷಗಳಿಂದ ರಾಜ್ಯದಲ್ಲಿ ಪಬ್ ಮತ್ತು ಲೈವ್ ಬ್ಯಾಂಡ್‌ಗಳಿಗೆ ಮಂಜೂರಾತಿ ನೀಡಲಾಗಿದೆಯೇ;

ಆ) ಅನಧಿಕೃತವಾಗಿ ಪಬ್ ಮತ್ತು ಲೈವ್ ಬ್ಯಾಂಡ್‌ಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ;

ಇ) ಹಾಗಿದ್ದಲ್ಲಿ ಸರ್ಕಾರ ಎಷ್ಟು ಪ್ರಕರಣಗಳನ್ನು ಗುರುತಿಸಿದ್ದು, ಯಾವ ರೀತಿಯ ಕಾನೂನು ಕ್ರಮಗಳನ್ನು ಕೈಗೊಂಡಿದೆ (ಜಿಲ್ಲಾವಾರು ವಿವರ ನೀಡುವುದು) ;

ಶ್ರೀ ಎಂ.ಪಿ. ರೇಣುಕಾಚಾರ್ಯ (ಅಬಕಾರಿ ಸಚಿವರು):–

ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಹೊಸದಾಗಿ ಪಬ್‌ಗಳಿಗೆ ಮಂಜೂರಾತಿ ನೀಡಲಾಗಿದೆ. ಲೈವ್‌ಬ್ಯಾಂಡ್‌ಗೆ ಮಂಜೂರಾತಿ ನೀಡುವ ಅಧಿಕಾರ ಅಬಕಾರಿ ಇಲಾಖೆಯ ವ್ಯಾಪ್ತಿಗೆ ಒಳಪಡುವುದಿಲ್ಲ.

ಆ) ಅನಧಿಕೃತವಾಗಿ ಪಬ್‌ಗಳು ನಡೆಯುತ್ತಿರುವುದು ಅಬಕಾರಿ ಇಲಾಖೆಯ ಗಮನಕ್ಕೆ ಬಂದಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.